ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ ಬೆಂಗಳೂರು-12

ಸಂಖ್ಯೆಃ ಪಪೂಶಿಃಪರೀಕ್ಷೆ/ಮಾರ್ಚ್/2015-16 ದಿನಾಂಕಃ 06-02-2015

ಸುತ್ತೋಲೆ

ವಿಷಯ: ಕರ್ನಾಟಕದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆ ಸಂಬಂಧ - ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡುವ ಬಗ್ಗೆ.

*****

ಸರ್ಕಾರದ ಆದೇಶದನ್ವಯ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಕರ್ನಾಟಕದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ ಸಂಬಂಧ ದಿನಾಂಕ 02-03-2016 ರಿಂದ 06-03-2016ರ ವರೆಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಿದೆ.

ಸದರಿ ಸ್ಪರ್ಧಾತ್ಮಕ ಪರೀಕ್ಷೆಯು 2016ನೇ ಸಾಲಿನ ಮೊದಲನೇ ವರ್ಷದ ಪಿಯು ಪರೀಕ್ಷೆಗಳ ದಿನಾಂಕಗಳಂದೇ ನಿಗದಿಯಾಗಿರುತ್ತದೆ. ಈ ಹಿನ್ನಲೆಯಲ್ಲಿ ಹಾಲಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ / ಬೋಧಕೇತರ ಸಿಬ್ಬಂದಿ ವರ್ಗದವರು ಸದರಿ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುತ್ತಿದ್ದಲ್ಲಿ ಅಂತಹ ಬೋಧಕ / ಬೋಧಕೇತರ ಸಿಬ್ಬಂದಿ ವರ್ಗದವರಿಗೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಲು ಅನುಕೂಲವಾಗುವಂತೆ ಹಾಗು ಮೊದಲನೇ ವರ್ಷದ ಪಿಯು ಪರೀಕ್ಷೆಗಳ ಕಾರ್ಯಗಳಿಗೆ ಯಾವುದೇ ತೊಂದರೆಯಾಗದಂತೆ ಬದಲಿ ವ್ಯವಸ್ಥೆ ಮಾಡಿ ಸಂಬಂಧಿಸಿದ ಬೋಧಕ / ಬೋಧಕೇತರ ಸಿಬ್ಬಂದಿಗಳಿಗೆ ಪರೀಕ್ಷಾ ಸಂಬಂಧ ನೀಡಲಾಗುವ ಪ್ರವೇಶ ಪತ್ರವನ್ನು ಆಧರಿಸಿ ಅವರುಗಳಿಗೆ ನಿಯಮಾನುಸಾರ ವೈಯಕ್ತಿಕ ರಜೆ ನೀಡುವಂತೆ ಸಂಬಂಧಿಸಿದ ಪಿಯು ಕಾಲೇಜಿನ ಪ್ರಿನ್ಸಿಪಾಲರುಗಳಿಗೆ ಸೂಚಿಸಲು ಆದೇಶಿಸಲಾಗಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ

ಇವರಿಗೆ:
ರಾಜ್ಯದ ಎಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರುಗಳಿಗೆ.

ಪ್ರತಿಯನ್ನು ಮಾಹಿತಿಗಾಗಿ:
ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರ ಮಾಹಿತಿಗಾಗಿ.